ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಲೋಕ ಸಭಾ ಸ್ಪೀಕರ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 7/1/2021

# ಧರ್ಮೇಗೌಡ ಸಾವಿನ ತನಿಖೆ ಬಗ್ಗೆ ಸ್ಪೀಕರ್ ಬಿರ್ಲಾ ಟ್ವೀಟ್ ಪರಿಗಣನೆ

ಕ.ಪ್ರ. 1/1/21



**ಬೆಂಗಳೂರು:** ವಿಧಾನ ಪರಿಷತ್ ಉಪಸಭಾಪತಿ ಎಸ್.ಎಲ್.ಧರ್ಮೇಗೌಡ ಅವರ ಸಾವಿನ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಲೋಕಸಭಾ ಸ್ಪೀಕರ್ ಟ್ವೀಟ್ ಮಾಡಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಧರ್ಮೇಗೌಡ ಅವರ ಸಾವಿನ ಮರಣೋತ್ತರ ಪರೀಕ್ಷೆ ವರದಿ, ಡೆತ್‌ನೋಟ್ ಹಾಗೂ ಸ್ಥಳದಲ್ಲಿನ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಪ್ರಾಥಮಿಕ ವರದಿ ಬಂದ ಬಳಿಕ ಉನ್ನತ ಮಟ್ಟದ ತನಿಖೆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು' ಎಂದರು. ವಿಧಾನ ಪರಿಷತ್ ಉಪ ಸಭಾಪತಿಯಾಗಿದ್ದ ಧರ್ಮೇಗೌಡ ಅವರು ನಾಲ್ಕು ದಿನಗಳ ಹಿಂದೆ ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕಿನ ಬಳಿ ರೈಲಿಗೆ ಸಿಕ್ಕಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಈ ವಿಚಾರ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಯಾಗಿತ್ತು. ಉಪ ಸಭಾಪತಿ ಸಾವಿನ ಬಗ್ಗೆ ಆಘಾತ ವ್ಯಕ್ತಪಡಿಸಿದ್ದ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಈ ಕುರಿತು ಉನ್ನತ ಮಟ್ಟದ ತನಿಖೆಗೆ ಸಲಹೆ ನೀಡಿದ್ದರು.